ಕರ್ನಾಟಕ ಸರ್ಕಾರ
ಮಕ್ಕಳ ರಕ್ಷಣಾ ನಿರ್ದೇಶನಾಲಯ
**3 ನೇ ಮಹಡಿ, ವಿಶ್ವೇಶ್ವರಯ್ಯ ಚಿಕ್ಕಗೋಪುರ, ಡಾ॥ ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560001.**
**E-mail ID: icps.kar@gmail.com** **Ph.No.080-22869381/82**

ಸಂ:ಮರನಿ/ಮರ/ಅಗತ್ಯಸೇವೆ-07/2021-22 ದಿನಾಂಕ:08.05.2021

ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು
ಜಿಲ್ಲಾ ಮಕ್ಕಳ ರಕ್ಷಣಾ ಘಟಕ,
ಎಲ್ಲಾ ಜಿಲ್ಲೆಗಳು.

ಮಾನ್ಯರೇ,

**ವಿಷಯ:** ಮಕ್ಕಳ ರಕ್ಷಣಾ ಸೇವೆಗಳನ್ನು ಒದಗಿಸುತ್ತಿರುವ ಮಕ್ಕಳ ರಕ್ಷಣಾ ನಿರ್ದೇಶನಾಲಯವನ್ನು ಅತ್ಯಗತ್ಯ ಸೇವೆ ಒದಗಿಸುತ್ತಿರುವ ಇಲಾಖೆಯೆಂದು ಪರಿಗಣಿಸಿರುವುದರಿಂದ ಕೈಗೊಳ್ಳಬೇಕಾದ ಕ್ರಮಗಳ ಕುರಿತು.

**ಉಲ್ಲೇಖ:** ಸಿಬ್ಬಂದಿ ಆಡಳಿತ ಸುಧಾರಣೆ ಇಲಾಖೆ (ಕಾರ್ಯಕಾರಿ)ಬೆಂಗಳೂರು ಇವರ ಆದೇಶ ಸಂ:ಸಿಆಸುಇ 87 ಡಿಇವಿ 2021 ದಿನಾಂಕ:06.05.2021

*** *** ***

ಮಕ್ಕಳ ರಕ್ಷಣಾ ಸೇವೆಗಳನ್ನು ಒದಗಿಸುತ್ತಿರುವ **"ಮಕ್ಕಳ ರಕ್ಷಣಾ ನಿರ್ದೇಶನಾಲಯವನ್ನು ಅತ್ಯಗತ್ಯ ಸೇವೆ ಒದಗಿಸುತ್ತಿರುವ ಇಲಾಖೆಯೆಂದು ಪರಿಗಣಿಸಿ" ದಿನಾಂಕ:06.05.2021ರಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣ ಇಲಾಖೆ (ಕಾರ್ಯಕಾರಿ) ಬೆಂಗಳೂರು, ಇವರು ಉಲ್ಲೇಖದ ಸರಕಾರಿ ಆದೇಶವನ್ನು ಹೊರಡಿಸಿರುತ್ತಾರೆ.** (ಪ್ರತಿ ಲಗತ್ತಿಸಿದೆ) ಆದುದರಿಂದ ಮಕ್ಕಳ ರಕ್ಷಣಾ ನಿರ್ದೇಶನಾಲಯದ ಅಡಿಯಲ್ಲಿ ಸಮಗ್ರ ಮಕ್ಕಳ ರಕ್ಷಣಾ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಮಕ್ಕಳ ರಕ್ಷಣಾ ಸೇವೆಗಳನ್ನು ಒದಗಿಸುತ್ತಿರುವ ಈ ಕೆಳಕಂಡ ಸೇವೆಗಳನ್ನು ಅತ್ಯಗತ್ಯ ಸೇವೆಯ ಅಡಿಯಲ್ಲಿ ಪರಿಗಣಿಸಲಾಗಿದೆ.

1. ಮಕ್ಕಳ ಪಾಲನಾ ಸಂಸ್ಥೆಗಳು (ಸರ್ಕಾರಿ/ ಸರ್ಕಾರದಿಂದ ಅನುದಾನ ಪಡೆಯುತ್ತಿರುವ ಮಕ್ಕಳ ಪಾಲನಾ ಸಂಸ್ಥೆಗಳು ಹಾಗೂ ಸರ್ಕಾರದಿಂದ ಬಾಲನ್ಯಾಯ(ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ 2015ರ ಅಡಿ ಮಕ್ಕಳ ಪಾಲನಾ ಸಂಸ್ಥೆಗಳೆಂದು ನೊಂದಾಯಿಸಲ್ಪಟ್ಟ ಖಾಸಗಿ ಮಕ್ಕಳ ಪಾಲನಾ ಸಂಸ್ಥೆಗಳನ್ನು ಸಹ ಅತ್ಯಗತ್ಯ ಸೇವೆ ಅಡಿಯಲ್ಲಿ ಪರಿಗಣಿಸಲಾಗಿದೆ.
2. ಮಕ್ಕಳ ಸೇವೆ ಒದಗಿಸುತ್ತಿರುವ ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ ಹಾಗೂ ಎಲ್ಲಾ ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳು, ಸಹ ಅತ್ಯಗತ್ಯ ಸೇವೆ ಅಡಿಯಲ್ಲಿ ಪರಿಗಣಿಸಲಾಗಿದೆ.
3. 24/7 ಮಕ್ಕಳ ಸೇವೆ ಒದಗಿಸುತ್ತಿರುವ **"ಮಕ್ಕಳ ಸಹಾಯವಾಣಿ-1098** ಮತ್ತು ಮಕ್ಕಳಿಗಾಗಿ ಉಚಿತ ಟೆಲಿ ಆಪ್ತಸಮಾಲೋಚನೆ-14499" ಸಹ ಅತ್ಯಗತ್ಯ ಸೇವೆ ಅಡಿಯಲ್ಲಿ ಪರಿಗಣಿಸಲಾಗಿದೆ.
4. ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ 2015ರ ಅಡಿ ರಚಿಸಲಾದ ಶಾಸನಬದ್ದ ಬಾಲನ್ಯಾಯ ಮಂಡಳಿಗಳು, ಮಕ್ಕಳ ಕಲ್ಯಾಣ ಸಮಿತಿಗಳು ಮತ್ತು ಎಲ್ಲಾ ವಿಶೇಷ ಮಕ್ಕಳ ಪೊಲೀಸ್ ಘಟಕಗಳು ಸಹ ಅತ್ಯಗತ್ಯ ಸೇವೆ ಅಡಿಯಲ್ಲಿ ಪರಿಗಣಿಸಲಾಗಿದೆ.

**ಈ ಹಿನ್ನಲೆಯಲ್ಲಿ ಕೆಳಕಂಡತೆ ಕ್ರಮ ಕೈಗೊಳ್ಳಲು ಕೋರಲಾಗಿದೆ:**

1. ಮೇಲ್ಕಂಡ ಬಾಲನ್ಯಾಯ ಮಂಡಳಿ/ಮಕ್ಕಳ ಕಲ್ಯಾಣ ಸಮಿತಿ/ಜಿಲ್ಲಾ ಮಕ್ಕಳ ರಕ್ಷಣಾ ಘಟಕ/ನೋಂದಾಯಿತ ಮಕ್ಕಳ ಪಾಲನಾ ಸಂಸ್ಥೆ/ ವಿಶೇಷ ಮಕ್ಕಳ ಪೊಲೀಸ್ ಘಟಕಗಳು /1098-ಮಕ್ಕಳ ಸಹಾಯವಾಣಿಗಳಲ್ಲಿ ಮತ್ತು ಉಚಿತ ಟೆಲಿ ಆಪ್ತಸಮಾಲೋಚನೆ-14499 ಸೇವೆಸಲ್ಲಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿಗಳು ಕಡ್ಡಾಯವಾಗಿ ಕಛೇರಿಯ ಕರ್ತವ್ಯಕ್ಕೆ ಹಾಜರಾಗುವಂತೆ ಕ್ರಮ ಕೈಗೊಳ್ಳುವುದು.

2. ಎಲ್ಲಾ ನೋಂದಾಯಿತ ಮಕ್ಕಳ ಪಾಲನಾ ಸಂಸ್ಥೆಗಳ ಸಿಬ್ಬಂದಿಗಳಿಗೆ, (ಆದ್ಯತೆಯ ಮೇರೆಗೆ ಸರ್ಕಾರಿ ಸಂಸ್ಥೆಗಳು, ಸರ್ಕಾರದಿಂದ ಅನುದಾನ ಪಡೆಯುತ್ತಿರುವ ಮಕ್ಕಳ ಪಾಲನಾ ಸಂಸ್ಥೆಗಳು) ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿ/ಸಿಬ್ಬಂದಿ, ಚೈಲ್ಡ್ ಲೈನ್-1098 ಕ್ಷೇತ್ರ ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ, ಮಕ್ಕಳ ಕಲ್ಯಾಣ ಸಮಿತಿ ಮತ್ತು ಬಾಲ ನ್ಯಾಯ ಮಂಡಳಿ ಹಾಗೂ ವಿಶೇಷ ಮಕ್ಕಳ ಪೋಲಿಸ್ ಘಟಕದ ಸದಸ್ಯರಿಗೆ ಮತ್ತು ಅಧ್ಯಕ್ಷರಿಗೆ ಆದ್ಯತೆ ಮೇರೆಗೆ ಕೋವಿಡ್ ಲಸಿಕೆಯನ್ನು ಮಾಡಿಸುವುದು.

3. ಅತ್ಯಗತ್ಯ ಸೇವೆ ಎಂದು ಗುರುತಿನ ಚೀಟಿಯನ್ನು ಕ್ಷೇತ್ರಮಟ್ಟದ ಅಧಿಕಾರಿ/ಸಿಬ್ಬಂದಿಗೆ ಒದಗಿಸುವುದು

ತಮ್ಮ ವಿಶ್ವಾಸಿ,

08.05.2021

ನಿರ್ದೇಶಕರು,
ಮಕ್ಕಳ ರಕ್ಷಣಾ ನಿರ್ದೇಶನಾಲಯ,
ಬೆಂಗಳೂರು.

<u>ಪ್ರತಿಯನ್ನು:</u>

1. ಸರ್ಕಾರದ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ ಹಿರಿಯನಾಗರೀಕರ ಸಬಲೀಕರಣ ಇಲಾಖೆ, ಬೆಂಗಳೂರು
2. ನೋಡಲ್ ಅಧಿಕಾರಿಗಳು, ಕೋವಿಡ್ ನಿರಾಶ್ರಿತ ಮಕ್ಕಳು, ಬೆಂಗಳೂರು.
2. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಸದಸ್ಯ ಕಾರ್ಯದರ್ಶಿಗಳು ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ, ಬೆಂಗಳೂರು
3. ಎಲ್ಲಾ ಜಿಲ್ಲೆಯ ಅಧ್ಯಕ್ಷರು ಹಾಗೂ ಸದಸ್ಯರು, ಬಾಲನ್ಯಾಯ ಮಂಡಳಿ
4. ಎಲ್ಲಾ ಜಿಲ್ಲೆಯ ಅಧ್ಯಕ್ಷರು ಹಾಗೂ ಸದಸ್ಯರು, ಮಕ್ಕಳ ಕಲ್ಯಾಣ ಸಮಿತಿ
5. ಎಲ್ಲಾ ಜಿಲ್ಲೆಯ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ,
6. ಎಲ್ಲಾ ಸರ್ಕಾರಿ, ಸರ್ಕಾರಿ ಅನುದಾನಿತ ಹಾಗೂ ಖಾಸಗಿ ಮಕ್ಕಳ ಪಾಲನಾ ಸಂಸ್ಥೆಗಳ ಅಧೀಕ್ಷಕರುಗಳಿಗೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಮುಖಾಂತರ
7. ಶಾಖಾ ರಕ್ಷಣಾ ಕಡತ.
5. ಕಛೇರಿ ಪ್ರತಿ.